# Akashvani : Bangalore
# Regional Bulletin In Kannada
# 24.01.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**24.01.2025 / 18.40 hrs**

ಮುಖ್ಯಾಂಶಗಳು

**೧. ಕ್ವಾಂಟಮ್ ಕಂಪ್ಯೂಟಿಂಗ್ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಮರ್ಥ್ಯ ವೃದ್ಧಿಗೆ ಬಂಡವಾಳ ಆಕರ್ಷಿಸಲು ಕೇಂದ್ರ ಸರ್ಕಾರದಿಂದ ಪೂರಕ ವಾತಾವರಣ -ಸಚಿವ ಜಿತೇಂದ್ರ ಸಿಂಗ್**

**೨. ನನ್ನ ಭೂಮಿ ಅಭಿಯಾನ ಜಾರಿಯಿಂದ ರೈತರಿಗೆ ಅನುಕೂಲ; ಸಚಿವ ಕೃಷ್ಣಭೈರೇಗೌಡ**

**೩. ಬೆಂಗಳೂರಿನಲ್ಲಿ ಫ್ರಾನ್ಸ್ ವೀಸಾ ನೀಡುವ ವ್ಯವಸ್ಥೆಗೆ ರಾಜ್ಯ ಸರ್ಕಾರದಿಂದ ಸಹಕಾರ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್**

**೪. ಬೆಂಬಲಬೆಲೆಯಲ್ಲಿ ಕಡಲೆಕಾಳು ಖರೀದಿಸಲು ಒಂದು ವಾರದೊಳಗೆ ನೊಂದಣಿ ಪ್ರಕ್ರಿಯೆ ಆರಂಭ**

**<><*<><>*><>**

ಆಧುನಿಕ ತಂತ್ರಜ್ಞಾನದಲ್ಲಿ ಅಗ್ರ ಸ್ಥಾನವನ್ನು ಹೊಂದುವ ಮೂಲಕ ಭಾರತವನ್ನು ಆರ್ಥಿಕವಾಗಿ ಮತ್ತು ರಾಷ್ಟ್ರೀಯ ಭದ್ರತಾ ದೃಷ್ಟಿಯಿಂದ ಸದೃಢಗೊಳಿಸಲು ಈ ದಶಕವನ್ನು ತಂತ್ರಜ್ಞಾನ ಸಂಚಾಲಿತ ದಶಕ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದಾರೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ತಿಳಿಸಿದ್ದಾರೆ. ಭಾರತೀಯ ವಿಜ್ಞಾನ ಸಂಸ್ಥೆ-ಐಐಎಸ್‌ಸಿ ಯಲ್ಲಿಂದು ವಿಡಿಯೋ ಕಾನ್ಫರೆನ್ಸ್ ಮೂಲಕ ತಂತ್ರಜ್ಞಾನ ಸಮಾಲೋಚನೆ ಎಂಬ ಸಮಾವೇಶವನ್ನುದ್ದೇಶಿಸಿ ಅವರು ಮಾತನಾಡುತ್ತಿದ್ದರು. ಆಧುನಿಕ ತಂತ್ರಜ್ಞಾನಗಳಿಂದ ಕಾಂಟಮ್ ಕಂಪ್ಯೂಟಿಂಗ್, ಕೃತಕಬುದ್ಧಿಮತ್ತೆ, ಹಸಿರು ಜಲಜನಕ ತಂತ್ರಜ್ಞಾನ ಮತ್ತು ಸೆಮಿಕಂಡಕ್ಟರ್ ಕ್ಷೇತ್ರದಲ್ಲಿ ಭಾರತ ಪ್ರಬುದ್ಧತೆ ಪಡೆಯಲು ವಿಶ್ವದ ಅನ್ಯ ಸಮ-ಮನಸ್ಕ ರಾಷ್ಟ್ರಗಳೊಂದಿಗೆ ಒಪ್ಪಂದ ಮಾಡಿಕೊಂಡಿದ್ದು, ಈ ಕ್ಷೇತ್ರದ ಸಂಪೂರ್ಣ ಲಾಭ ಭಾರತಕ್ಕೆ ಲಭಿಸುವಂತೆ ಸಕ್ರಿಯ ಪಾತ್ರ ವಹಿಸುತ್ತಿದೆ ಎಂದು ತಿಳಿಸಿದರು. ಈ ಕ್ಷೇತ್ರಗಳ ಸಾಮರ್ಥ್ಯ ವೃದ್ಧಿ ಮತ್ತು ನಾವೀನ್ಯತಾ ಪರಿಸರ ವೃದ್ಧಿಗೆ ಬಂಡವಾಳ ಆಕರ್ಷಿಸಲು ಸರ್ಕಾರ ಪೂರಕ ವಾತಾವರಣ ಕಲ್ಪಿಸುತ್ತಿದೆ ಎಂದು ಸಚಿವರು ತಿಳಿಸಿದರು.

**ಧ್ವನಿ: ಡಾ.ಜಿತೇಂದ್ರ ಸಿಂಗ್**

**<><*<><>*><>**

ರಾಜ್ಯದಲ್ಲಿ ಪೋಡಿ ದುರಸ್ತಿಯಾಗಿ ರೈತರು ಸರ್ಕಾರಿ ಕಚೇರಿಗೆ ಅಲೆಯುವುದನ್ನು ತಪ್ಪಿಸಲು 'ನನ್ನ ಭೂಮಿ ಅಭಿಯಾನ' ನಡೆಸಲಾಗುತ್ತಿದ್ದು, ಜಮೀನಿನ ಮಾಲೀಕತ್ವಕ್ಕೆ ರಾಜ್ಯ ಸರ್ಕಾರ ಅನುವು ಮಾಡಿಕೊಡಲಾಗುತ್ತಿದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿಶ್ವನಾಥಪುರ ಗ್ರಾಮದಲ್ಲಿ ಕಂದಾಯ ಇಲಾಖೆ ಮತ್ತು ಭೂ ಮಾಪನ ಇಲಾಖೆಯಡಿ ಸರಳೀಕರಣವಾದ ದರಖಾಸ್ತು ಪೋಡಿ ಅಭಿಯಾನಕ್ಕೆ ಮತ್ತು ಪೋಡಿ ದುರಸ್ತಿ ವಿತರಣೆಗೆ ಚಾಲನೆ ನೀಡಿ ಮಾತನಾಡಿದ ಅವರು, 'ನನ್ನ ಭೂಮಿ' ಅಭಿಯಾನದಡಿ ಸರಳೀಕರಣವಾದ ದರಖಾಸ್ತು ಪೋಡಿ ಅಭಿಯಾನ ಈಗಾಗಲೇ ಚಾಲನೆಗೊಂಡಿದ್ದು, ದಶಕಗಳಿಂದ ಆಗದಿರುವ ಪೋಡಿ ದುರಸ್ತಿ ವಿತರಣೆ ವೇಗವಾಗಿ ನಡೆಯಲು ಅಭಿಯಾನ ಸಹಕಾರಿಯಾಗಿದೆ ಎಂದು ತಿಳಿಸಿದರು. ದಶಕಗಳಿಂದ ರೈತರು ತಮ್ಮ ಜಮೀನಿಗೆ ಸಂಪೂರ್ಣ ಮಾಲಿಕತ್ವ ಸಿಗದೇ ಸರ್ಕಾರಿ ಕಚೇರಿಗಳಿಗೆ ಅಲೆದಾಡಬೇಕಾಗಿದೆ. ರಾಜ್ಯದಲ್ಲಿ ೧೫ ಲಕ್ಷ ಇಂತಹ ಪ್ರಕರಣಗಳಲ್ಲಿ ರೈತರಿಗೆ ಇನ್ನು ಮಾಲೀಕತ್ವ ಸಿಕ್ಕಿಲ್ಲ. ಇದನ್ನು ಮನಗಂಡಿರುವ ರಾಜ್ಯ ಸರ್ಕಾರ ಪೋಡಿ ಅಭಿಯಾನವನ್ನು ಸರಳೀಕೃತಗೊಳಿಸಿ, ಡಿಜಿಟಲೀಕರಣ ಮಾಡಿ ಕಳೆದ ಡಿಸೆಂಬರ್‌ನಿಂದ ಅನುಷ್ಠಾನಗೊಳಿಸಿದೆ ಎಂದರು.

**ಧ್ವನಿ: ಕೃಷ್ಣಭೈರೇಗೌಡ, ಕಂದಾಯ ಸಚಿವರು**

**<><*<><>*><>**

ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕಿಗೆ ಸಂಬಂಧಿಸಿದ ಕಂದಾಯ ಇಲಾಖೆಯ ಮಹತ್ವಾಕಾಂಕ್ಷಿ ಯೋಜನೆಯಾದ "ಭೂ ಸುರಕ್ಷಾ ಯೋಜನೆ" ಹಳೆಯ ಭೂದಾಖಲೆಗಳ ಗಣಕೀಕರಣದಿಂದ ದಾಖಲೆಗಳ ಸುರಕ್ಷತೆ ಮತ್ತು ಸುಲಭ ಲಭ್ಯತೆಯ ಗ್ಯಾರಂಟಿ, ತಾಲ್ಲೂಕು ಕಚೇರಿ ಸರ್ವೆ ಮತ್ತು ಮೋಜಣಿ ಇಲಾಖೆಗಳ ಎಲ್ಲಾ ಭೂದಾಖಲೆಗಳ ಡಿಜಿಟಲೀಕರಣವನ್ನು ಶಾಸಕ ರಿಜ್ವಾನ್ ಅರ್ಷದ್ ಹಾಗೂ ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ್ ಉದ್ಘಾಟಿಸಿದರು.

**<><*<><>*><>**

೨೦೨೬ರ ವೇಳೆಗೆ ಬೆಂಗಳೂರಿನಲ್ಲಿ ಫ್ರಾನ್ಸ್ ದೇಶಕ್ಕೆ ವೀಸಾ ನೀಡುವ ವ್ಯವಸ್ಥೆಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಇದಕ್ಕೆ ರಾಜ್ಯ ಸರ್ಕಾರದಿಂದಲೂ ಸಹಕಾರ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ವಿಧಾನಸೌಧದ ಆವರಣದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಫ್ರಾನ್ಸ್ ದೇಶದ ದೂತವಾಸ ಕಚೇರಿಯ

ಅಧಿಕಾರಿಗಳು ತನ್ನ ಭೇಟಿ ಮಾಡಿ ಸಂತಸ ವ್ಯಕ್ತಪಡಿಸಿದ್ದಾರೆ. ಕರ್ನಾಟಕದಿಂದ ಉತ್ತಮ ಹೂಡಿಕೆದಾರರು ಬರುತ್ತಿದ್ದು, ತಮ್ಮ ಹೂಡಿಕೆದಾರರು ಸಂತಸಗೊಂಡಿದ್ದಾರೆ ಎಂದು ಅವರು ಹರ್ಷ ವ್ಯಕ್ತಪಡಿಸಿರುವುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು. ರಾಜ್ಯದಲ್ಲಿ ಪ್ರಗತಿಪರ ಸರ್ಕಾರವಿದ್ದು, ಅವರ ಪ್ರಯತ್ನಗಳಿಗೆ ಸಹಕಾರವಿರಲಿದೆ ಎಂದು ಅವರು ಹೇಳಿದರು.

<><*<><>*><>

ಬೆಂಬಲ ಬೆಲೆಯಲ್ಲಿ ಕಡ್ಲೆಕಾಳು ಖರೀದಿಸಲು ಒಂದು ವಾರದೊಳಗೆ ನೋಂದಣಿ ಪ್ರಕ್ರಿಯೆ ಆರಂಭಿಸಲಾಗುವುದು ಎಂದು ಸಚಿವ ಶಿವಾನಂದ ಎಸ್ ಪಾಟೀಲ್ ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆಯಲ್ಲಿ ತಿಳಿಸಿರುವ ಅವರು, ರಾಜ್ಯ ಸರ್ಕಾರದ ಮನವಿ ಮೇರೆಗೆ ಕೇಂದ್ರ ಸರ್ಕಾರ ಕಡ್ಲೆಕಾಳುಗಳನ್ನು ಬೆಂಬಲಬೆಲೆಯಲ್ಲಿ ಖರೀದಿಸಲು ಅನುಮತಿ ನೀಡಿದ್ದು, ಪ್ರತೀ ಕ್ವಿಂಟಲ್‌ಗೆ ೫ ಸಾವಿರದ ೬೫೦ ರೂಪಾಯಿ ನಿಗದಿಪಡಿಸಲಾಗಿದೆ. ನೊಂದಣಿಗೆ ೮೦ ಹಾಗೂ ಖರೀದಿಗೆ ೯೦ ದಿನ ಕಾಲವಕಾಶ ನಿಗದಿಪಡಿಸಲಾಗಿದೆ ಎಂದು ಸಚಿವ ಶಿವಾನಂದ ಎಸ್ ಪಾಟೀಲ್ ತಿಳಿಸಿದ್ದಾರೆ.

<><*<><>*><>

ನಾಳೆ ನಡೆಯಲಿರುವ ರಾಷ್ಟ್ರೀಯ ಮತದಾರರ ದಿನಾಚರಣೆ ಪೂರ್ವಭಾವಿಯಾಗಿ ಇಂದು ಚಿಕ್ಕಬಳ್ಳಾಪುರ ಜಿಲ್ಲಾಡಳಿತದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿ ರಾಷ್ಟ್ರೀಯ ಮತದಾರರ ದಿನದ ಪ್ರತಿಜ್ಞಾ ವಿಧಿಯನ್ನು ಸ್ವೀಕರಿಸಿದರು. ಜಿಲ್ಲೆಯ ಬಾಗೇಪಲ್ಲಿ, ಶಿಡ್ಲಘಟ್ಟ ಸೇರಿದಂತೆ ಎಲ್ಲಾ ತಾಲ್ಲೂಕು ಮಟ್ಟದ ಸರ್ಕಾರಿ ಕಚೇರಿಗಳು ಮತ್ತು ಕಾಲೇಜುಗಳು ಹಾಗೂ ವಸತಿ ನಿಲಯಗಳಲ್ಲೂ ಪ್ರತಿಜ್ಞಾವಿಧಿಯನ್ನು ಸ್ವೀಕರಿಸಲಾಯಿತು.

<><*<><>*><>

ಪಿಎಂ ಸ್ವನಿಧಿ, ಪಿಎಂ ಉದ್ಯೋಗ ಸೃಜನಾ ಯೋಜನೆ -ಪಿಎಂಇಜಿಪಿ, ಸೇರಿದಂತೆ ವಿವಿಧ ಸರ್ಕಾರಿ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಬ್ಯಾಂಕ್‌ಗಳಲ್ಲಿ ಸಾಲ ಮಂಜೂರಾತಿಗಾಗಿ ಬಾಕಿ ಉಳಿದಿರುವ ಎಲ್ಲಾ ಅರ್ಜಿಗಳನ್ನು ಶೀಘ್ರದಲ್ಲಿ ಇತ್ಯರ್ಥಗೊಳಿಸುವಂತೆ ಬ್ಯಾಂಕ್ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಈಶ್ವರ್ ಕಾಂದೂ ನಿರ್ದೇಶನ ನೀಡಿದ್ದಾರೆ. ಅವರು ಕಾರವಾರದಲ್ಲಿ ನಡೆದ ಜಿಲ್ಲಾ ಅಗ್ರಣಿ ಬ್ಯಾಂಕ್ ವತಿಯಿಂದ ಆಯೋಜಿಸಿದ್ದ ಬ್ಯಾಂಕ್ ಗಳ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲಾ ಲೀಡ್ ಬ್ಯಾಂಕ್ ವ್ಯವಸ್ಥಾಪಕಿ ಭಾರತಿ ವಸಂತ ಮಾತನಾಡಿ, ೨೦೨೪ರ ನವೆಂಬರ್ ಅಂತ್ಯದವರೆಗೆ ಜಲ್ಲೆಯಲ್ಲಿ ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆಯಡಿ ಸುಮಾರು ೨ ಲಕ್ಷ ೪೩ ಸಾವಿರ ನೋಂದಣಿಗಳು ದಾಖಲಾಗಿದೆ. ಪ್ರಧಾನ ಮಂತ್ರಿ ಬಿಮಾ ಸುರಕ್ಷಾ ಯೋಜನೆಯಡಿ ೬ ಲಕ್ಷ ೨೨ ಸಾವಿರದ ೧೮೦, ಅಟಲ್ ಪಿಂಚಣಿ ಯೋಜನೆಯಡಿ ೯೮

ಸಾವಿರದ ೪೧೪ ಮಂದಿಯನ್ನು ನೋಂದಣಿ ಮಾಡಲಾಗಿದೆ. ಸೆಪ್ಟೆಂಬರ್ ೨೦೨೪ರ ಅಂತ್ಯಕ್ಕೆ ಜಿಲ್ಲೆಯಲ್ಲಿ ೨೨ ಸಾವಿರದ ೯೭೪ ಕೋಟಿ ರೂಪಾಯಿ ಠೇವಣಿ ಸಂಗ್ರಹಿಸಿ, ೧೦ ಸಾವಿರದ ೬೪೩ ಕೋಟಿ ರೂಪಾಯಿ ಸಾಲ ವಿತರಿಸಲಾಗಿದೆ. ಸಾಲ ಮತ್ತು ಠೇವಣಿ ಅನುಪಾತ ಶೇಕಡ ೪೬.೩೩ ರಷ್ಟಿದ್ದು, ಕಳೆದ ಬಾರಿಗಿಂತ ಶೇಕಡ ೨.೧೧ ರಷ್ಟು ಹೆಚ್ಚಾಗಿದೆ ಎಂದು ಮಾಹಿತಿ ನೀಡಿದ್ದಾರೆ.

<><*<><>*><>

ಚಿಕ್ಕಮಗಳೂರು ಜಿಲ್ಲೆಯಲ್ಲಿ ೪ ಮಂಗನ ಕಾಯಿಲೆ ಪ್ರಕರಣಗಳು ಪತ್ತೆಯಾಗಿದ್ದು, ಈ ಕಾಯಿಲೆ ಬಗ್ಗೆ ಅರಣ್ಯದಂಚಿನಲ್ಲಿ ಮತ್ತು ಕಾಫಿ ತೋಟಗಳಲ್ಲಿ ವಾಸವಾಗಿರುವ ಜನರು ಎಚ್ಚರಿಕೆವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ. ಜಿಲ್ಲೆಯಲ್ಲಿ ಕಂಡು ಬಂದಿರುವ ೪ ಪ್ರಕರಣಗಳಲ್ಲಿ ಒಬ್ಬರು ಈಗಾಗಲೇ ಗುಣಮುಖರಾಗಿದ್ದು, ಮೂವರಿಗೆ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಈ ಬಗ್ಗೆ ಜನರು ಆತಂಕ ಪಡುವ ಅಗತ್ಯವಿಲ್ಲ. ಆದರೆ ಸೂಕ್ತ ಮುಂಜಾಗ್ರತೆ ತೆಗೆದುಕೊಳ್ಳಬೇಕು. ಕಾಡಿನಲ್ಲಿ ಮೃತಪಟ್ಟ ಮಂಗಗಳಿಗೆ ಕಚ್ಚುವ ಉಣ್ಣೆಯಂತಹ ವೈರಾಣುವಿನಿಂದ ಈ ರೋಗ ಹರಡುತ್ತದೆ. ಹಾಗಾಗಿ ಕಾಡು ಅಥವಾ ತೋಟಗಳಿಗೆ ತೆರಳುವವರು ಮೈತುಂಬ ಬಟ್ಟೆ ತೊಡಬೇಕು, ಹೆಚ್ಚಿನ ಚಳಿ, ಜ್ವರ, ತಲೆನೋವು, ಶೀತ, ವಾಂತಿ ಉಂಟಾದರೆ ಕೂಡಲೆ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ

<><*<><>*><>

ಇಂದು ದೇಶಾದ್ಯಂತ ರಾಷ್ಟ್ರೀಯ ಹೆಣ್ಣುಮಕ್ಕಳ ದಿನಾಚರಣೆ ಆಚರಿಸಲಾಗುತ್ತಿದೆ. ಈ ದಿನಾಚರಣೆಯನ್ನು ೨೦೦೮ ರಲ್ಲಿ ಕೇಂದ್ರ ಸರ್ಕಾರ, ಸಮಾಜದಲ್ಲಿ ಹೆಣ್ಣು ಮಕ್ಕಳು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಪ್ರಾರಂಭಿಸಿತು. ಈ ದಿನವು ಹೆಣ್ಣುಮಕ್ಕಳನ್ನು ಸಬಲೀಕರಣಗೊಳಿಸಲು ಮತ್ತು ರಕ್ಷಿಸಲು ಅಗತ್ಯವಿರುವ ಸಾಮೂಹಿಕ ಪ್ರಯತ್ನವನ್ನು ನೆನಪಿಸುತ್ತದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಹಯೋಗದಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆಯನ್ನು ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಆಚರಿಸಲಾಯಿತು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ಉಪ ನಿರ್ದೇಶಕ ಮುದ್ದಣ್ಣ ಮಾತನಾಡಿ, ಹೆಣ್ಣು ಮಕ್ಕಳ ಸುರಕ್ಷತೆ ಮತ್ತು ಶಿಕ್ಷಣದ ಬಗ್ಗೆ ಅರಿವು ಮೂಡಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ರಾಷ್ಟ್ರೀಯ ದಿನಾಚರಣೆ ಪ್ರಮುಖ ಪಾತ್ರ ವಹಿಸಿದ್ದು, ಹೆಣ್ಣುಮಕ್ಕಳಿಗೆ ಆರೋಗ್ಯಕರ ಮತ್ತು ಸುರಕ್ಷಿತ ವಾತಾವರಣವನ್ನು ನಿರ್ಮಿಸುವ ಕುರಿತು ಜಾಗೃತಿ ಮೂಡಬೇಕಿದೆ ಎಂದರು.

<><*<><>*><>

ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿರುವ ರಾಯಚೂರ ಜಿಲ್ಲೆಯ ವಸತಿ ನಿಲಯಗಳಲ್ಲಿ ಮೂಲ ಸೌಕರ್ಯ, ಅಲ್ಲಿನ ವಿದ್ಯಾರ್ಥಿಗಳಿಗೆ ಉತ್ತಮ ವಿದ್ಯಾಭ್ಯಾಸಕ್ಕೆ ಅವಕಾಶ ಕಲ್ಪಿಸಿ ವಸತಿ ನಿಲಯಗಳಲ್ಲಿ ಶಿಸ್ತು ಕಾಪಾಡಬೇಕು ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಜನವರಿ ೨೫ರಂದು ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

**<><*<><>*><>**

ಇದೇ ಜನವರಿ ೨೬ ರಂದು ದೆಹಲಿಯಲ್ಲಿ ನಡೆಯುವ ಗಣರಾಜ್ಯೋತ್ಸವಕ್ಕೆ ವಿಶೇಷ ಅತಿಥಿಗಳಾಗಿ ಸಮಗ್ರ ಕೃಷಿ ಅಭಿವೃದ್ಧಿಯಲ್ಲಿ ಗಣನೀಯ ಸಾಧನೆ ಮಾಡಿರುವ ಕೃಷಿಕ ವಡ್ಡಗೆರೆ ಚಿನ್ನಸ್ವಾಮಿ ಅವರಿಗೆ ವಿಶೇಷ ಆಹ್ವಾನ ದೊರೆತಿದ್ದು ಈ ಬಗ್ಗೆ ವಡ್ಡಗೆರೆ ಚಿನ್ನಸ್ವಾಮಿ ಸಂತಸ ವ್ಯಕ್ತಪಡಿಸಿದ್ದಾರೆ. ಮೈಸೂರಿನಲ್ಲಿ ಈ ಬಗ್ಗೆ ಅಭಿಪ್ರಾಯ ಹಂಚಿಕೊಂಡ ಅವರು, ಕೃಷಿ ಕ್ಷೇತ್ರದಲ್ಲಿ ಇತ್ತೀಚಿನ ದಿನಗಳಲ್ಲಿ ಯುವ ಸಮೂಹ ದೂರ ಸರಿಯುತ್ತಿದೆ, ಆದ್ದರಿಂದ ಯುವ ಸಮೂಹಕ್ಕೆ ಕೃಷಿ ಚಟುವಟಿಕೆ ಕುರಿತು ಸಮಗ್ರ ಕೃಷಿ ಶೈಲಿಯನ್ನು ತಿಳಿಸಲು ಪ್ರಯತ್ನಿಸಲಾಗುತ್ತಿದೆ ಎಂದಿದ್ದಾರೆ.

**<><*<><>*><>**

ರಾಜ್ಯ ವಿಧಾನಸಭೆ ಸಚಿವಾಲಯದ ವತಿಯಿಂದ ಫೆಬ್ರವರಿ ೨೮ ರಿಂದ ಮಾರ್ಚ್ ೩ರವರೆಗೆ ಪುಸ್ತಕ ಮೇಳವನ್ನು ವಿಧಾನಸೌಧದ ಆವರಣದಲ್ಲಿ ಆಯೋಜಿಸಲಾಗಿದೆ. ನಾಲ್ಕು ದಿನಗಳ ಈ ಮೇಳಕ್ಕೆ ಸಂಬಂಧಿಸಿದ ಲಾಂಛನವನ್ನು ವಿನ್ಯಾಸಗೊಳಿಸಲು ಉದ್ದೇಶಿಲಾಗಿದ್ದು, ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ. ಆಯ್ಕೆಗೊಳ್ಳುವ ಲಾಂಛನದ ವಿನ್ಯಾಸಕರಿಗೆ ಬಹುಮಾನ ನೀಡಲಾಗುವುದು. ಆಸಕ್ತರು ಲಾಂಛನವನ್ನು ವಿನ್ಯಾಸಗೊಳಿಸಿ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿಗಳು ಅಂಚೆ ವಿಳಾಸಕ್ಕೆ ಕಳುಹಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><**